# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ -145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್-145 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯವರಾದ ಶ್ರೀಮತಿ. ಲಕ್ಷ್ಮೀದೇವಿ ಆರ್. ಉಪ ಆಯುಕ್ತರು ಕಂದಾಯ (ದಕ್ಷಿಣ) ರವರ ಅಪ್ಪಣೆ ಮೇರೆಗೆ ದಿನಾಂಕ:21/05/2022ರ ಶನಿವಾರದಂದು ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:-**

1. ಉಪ ಆಯುಕ್ತರು (ದಕ್ಷಿಣ) ಹಾಗೂ ವಾರ್ಡ್ 145ರ ನೋಡಲ್ ಅಧಿಕಾರಿ.
2. ಕೆಲಸ ಪರಿವೀಕ್ಷಕರು ವಾರ್ಡ್-145.
3. ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-145.
4. ಕಿರಿಯ ಇಂಜಿನಿಯರ್ (ವಿದ್ಯುತ್ ವಿಭಾಗ ಬಿಬಿಎಂಪಿ).
5. ತೋಟಗಾರಿಕೆ ಇಲಾಖೆ, ಮೇಲ್ವಿಚಾರಕರು ವಾರ್ಡ್ 145.
6. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಕಾನೂನು ಸುವ್ಯವಸ್ಥೆ ವಾರ್ಡ್ 145.
7. ಸಹಾಯಕ ಇಂಜಿನಿಯರ್ (BWSSB).
8. ಸಹಾಯಕ ಇಂಜಿನಿಯರ್ (ಬೆಸ್ಕಾಂ).
9. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಸಂಚಾರ ವಾರ್ಡ್ 145.
10. ಅರಣ್ಯ ಇಲಾಖೆಯ ಅಧಿಕಾರಿಗಳು.
11. ನಾಗರೀಕ ಕಲ್ಯಾಣ ಸಂಘದ ಸದಸ್ಯರು ಮತ್ತು ಸಾರ್ವಜನಿಕರು.

**ಸಭೆಗೆ ಗೈರು ಹಾಜರಾದ ಇಲಾಖೆಗಳು:-**

1. ಪೊಲೀಸ್ ಇಲಾಖೆ ಅಧಿಕಾರಿಗಳು (ಕಾನೂನು ಸುವ್ಯವಸ್ಥೆ) ಆಡುಗೋಡಿ.
2. ಸ.ಕಾ.ನಿ. ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ, ಬಿಬಿಎಂಪಿ ಕೇಂದ್ರ ಕಛೇರಿ.
3. ಸ.ಕಾ.ನಿ. ಅಭಿಯಂತರರು, ಯೋಜನೆ-ಕೇಂದ್ರ, ಬಿಬಿಎಂಪಿ ಕೇಂದ್ರ ಕಛೇರಿ.

*********

1. ವಾರ್ಡ್ ವ್ಯಾಪ್ತಿಯ ಹೊಸೂರು ಮುಖ್ಯರಸ್ತೆ ಹಾಗೂ ಹೆಚ್. ಸಿದ್ದಯ್ಯ ಮುಖ್ಯ ರಸ್ತೆಗಳಲ್ಲಿ ಮಳೆನೀರು ರಸ್ತೆ ಬದಿಯ ಚರಂಡಿಗಳಲ್ಲಿ ಹರಿಯಲು ಸರಿಯಾದ ಚರಂಡಿ ವ್ಯವಸ್ಥೆ ಇಲ್ಲದೆ ಇರುವುದನ್ನು ಸಾರ್ವಜನಿಕರು ಸಭೆಯ ಗಮನಕ್ಕೆ ತಂದರು. ಸಂಬಂಧಿಸಿದಂತೆ ರಸ್ತೆ ಮತ್ತು ಮೂಲಭೂತ ಸೌಕರ್ಯ ಹಾಗೂ ಕೇಂದ್ರ ಯೋಜನಾ ವಿಭಾಗದ ಇಂಜಿನಿಯರ್‌ಗಳೊಂದಿಗೆ ಮತ್ತು ಸ್ಥಳೀಯರು ಸೇರಿ ಸ್ಥಳ ಪರಿಶೀಲನೆಗೆ ದಿನಾಂಕ ನಿಗಧಿ ಪಡಿಸಲು ವಾರ್ಡ್ ಇಂಜಿನಿಯರ್ ರವರಿಗೆ ಅಧ್ಯಕ್ಷರು ಸೂಚಿಸಿದರು

2. ವಾರ್ಡ್‌ ವ್ಯಾಪ್ತಿಯ ಚಿನ್ನಯ್ಯನಪಾಳ್ಯದಲ್ಲಿ ರಸ್ತೆಗೆ ಅಳವಡಿಸಿರುವ ಅನಧಿಕೃತ ರಸ್ತೆ ಉಬ್ಬುಗಳನ್ನು ತೆರವುಗೊಳಿಸಲು ಶ್ರೀ. ರಮೇಶ್‌ಬಾಬು ರವರು ಸಭೆಯಲ್ಲಿ ಕೋರಿದರು. ಸಂಬಂಧಿಸಿದಂತೆ ವಾರ್ಡ್‌ ಇಂಜನಿಯರ್‌ರವರು ಮಾತನಾಡಿ ತೆರವುಗೊಳಿಸುವುದಾಗಿ ಸಭೆಗೆ ತಿಳಿಸಿದರು.

3. ವಾರ್ಡ್‌ ವ್ಯಾಪ್ತಿಯ ಮೇರಿ ಇಮ್ಯಾಕ್ಯುಲೇಟೀವ್ ಶಾಲೆಯ ಮುಂಭಾಗದಲ್ಲಿ ಬೈಕ್ ವೀಲಿಂಗ್ ನಡೆಯುತ್ತಿರುತ್ತದೆ ಇದರಿಂದ ರಸ್ತೆಯಲ್ಲಿ ಓಡಾಡುವ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ದೂರಿದರು. ಸಂಬಂಧಿಸಿದಂತೆ ಸದರಿ ವಿಷಯದ ಬಗ್ಗೆ ಆಡುಗೋಡಿ ಪೊಲೀಸ್ ಠಾಣೆಯವರಿಗೆ ಕ್ರಮ ಕೈಗೊಳ್ಳಲು ನೋಡಲ್ ಅಧಿಕಾರಿಯವರು ಸಭೆಯಲ್ಲಿ ತಿಳಿಸಿದರು.

4. ವಾರ್ಡಿನ ವ್ಯಾಪ್ತಿಯ ಬಿ.ಟಿ.ಎಸ್ ರಸ್ತೆ ಹಾಗೂ ಹೆಚ್. ಸಿದ್ದಯ್ಯ ರಸ್ತೆಯಲ್ಲಿ ಟ್ರಾಫಿಕ್ ವ್ಯವಸ್ಥೆ ಹಾಗೂ ವಾಹನಗಳ ಪಾರ್ಕಿಂಗ್ ವ್ಯವಸ್ಥಿತವಾಗಿ ಆಗುತ್ತಿಲ್ಲವೆಂದು ಸಾರ್ವಜನಿಕರು ದೂರಿದರು. ಸಭೆಯಲ್ಲಿ ಹಾಜರಿದ್ದ ಸಂಚಾರಿ ವಿಭಾಗದ ಎ.ಎಸ್.ಐ ರವರು ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

5. ವಾರ್ಡಿನ ವ್ಯಾಪ್ತಿಯ ಹೆಚ್. ಸಿದ್ದಯ್ಯ ರಸ್ತೆಯಲ್ಲಿ ಖಾಸಗಿ ಬಸ್ಸುಗಳು ಸಂಚರಿಸಲು ಅವಕಾಶವಿಲ್ಲ ಅಂತಹ ವಾಹನಗಳಿಗೆ ದಂಡ ವಿಧಿಸಲು ಶ್ರೀ. ರಮೇಶ್‌ಬಾಬು ರವರು ಸಭೆಯಲ್ಲಿ ಕೋರಿದರು. ಸದರಿ ವಿಷಯದ ಬಗ್ಗೆ ಟ್ರಾಫಿಕ್ ಪೊಲೀಸ್ ರವರು ಕ್ರಮ ವಹಿಸುವಂತೆ ಅಧ್ಯಕ್ಷರು ಸೂಚಿಸಿದರು.

6. ವಾರ್ಡಿನ ವ್ಯಾಪ್ತಿಯ ಅಭಯ ಆಸ್ಪತ್ರೆ ಮುಂಭಾಗದ ಹೊಸೂರು ಮುಖ್ಯರಸ್ತೆಯಲ್ಲಿ ಕ್ರೇನ್‌ಗಳನ್ನು ನಿಲ್ಲಿಸಲು ಅನುಮತಿ ನೀಡಬಾರದು ಅಂತವರ ಮೇಲೆ ಕಾನೂನು ಕ್ರಮ ಕೈಗೊಳ್ಳಲು ಸಭೆಯಲ್ಲಿ ಪೊಲೀಸ್ ರವರಿಗೆ ಅಧ್ಯಕ್ಷರು ಸೂಚಿಸಿದರು.

7. ವಾರ್ಡಿನ ವ್ಯಾಪ್ತಿಯ 6ನೇ ಅಡ್ಡರಸ್ತೆ ವಿಲ್ಸನ್‌ಗಾರ್ಡನ್ ಹಾಗೂ ಬಿಟಿಎಸ್ ರಸ್ತೆ ಹತ್ತಿರ ಹೊಸದಾಗಿ ಹೂವಿನ ಅಂಗಡಿ ಸ್ಥಾಪಿಸಲು ವ್ಯವಸ್ಥೆ ಮಾಡಿಕೊಂಡಿದ್ದು, ಹೊಸ ಅಂಗಡಿಯನ್ನು ತೆರೆಯದಂತೆ ಕ್ರಮ ವಹಿಸಲು ಸಾರ್ವಜನಿಕರು ಸಭೆಯಲ್ಲಿ ಕೋರಿದರು – ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಹೊಸ ಅಂಗಡಿಗಳನ್ನು ತೆರೆಯದಂತೆ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

8. ವಾರ್ಡಿನ ವ್ಯಾಪ್ತಿಯ ವಿಲ್ಸನ್‌ಗಾರ್ಡನ್ ಏರಿಯಾದಲ್ಲಿ ಹೂವಿನ ಅಂಗಡಿಗಳನ್ನು ತೆರೆದಿರುವ ಕಟ್ಟಡಗಳಿಂದ ವಾಣಿಜ್ಯ ತೆರಿಗೆ ವಸೂಲಿ ಮಡಲು ಸಭೆಯಲ್ಲಿ ಹಾಜರಿದ್ದ ಕಂದಾಯ ವಿಭಾಗದ ಅಧಿಕಾರಿಗಳಿಗೆ ಅಧ್ಯಕ್ಷರು ಸೂಚಿಸಿದರು.

9. ವಾರ್ಡಿನ ವ್ಯಾಪ್ತಿಯ ಹೆಚ್. ಸಿದ್ದಯ್ಯ ರಸ್ತೆಯಲ್ಲಿ ಅನಧಿಕೃತ ಫುಡ್ ಸ್ಟ್ರೀಟ್ ನಿರ್ಮಾಣವಾಗಿದ್ದು, ವಾಹನಗಳ ಅಡ್ಡಾದಿಡ್ಡಿ ಪಾರ್ಕಿಂಗ್‌ನಿಂದ ಬಿ.ಟಿ.ಎಸ್ ಬಸ್ಸುಗಳು ಹಾಗೂ ಸಾರ್ವಜನಿಕರಿಗೆ ಸಂಚಾರಕ್ಕೆ ತೀವ್ರ ತರಹದ ತೊಂದರೆಯಾಗಿರುತ್ತದೆ. ಸದರಿ ವಿಷಯದ ಬಗ್ಗೆ ಕ್ರಮ ವಹಿಸಲು ಸಂಚಾರಿ ವಿಭಾಗದ ಪೋಲೀಸರಿಗೆ ಅಧ್ಯಕ್ಷರು ಸೂಚಿಸಿದರು.

10. ವಾರ್ಡಿನ ವ್ಯಾಪ್ತಿಯ ಹೊಸೂರು ರಸ್ತೆಯ ಸ್ಕೈವಾಕ್‌ನಲ್ಲಿ ದೀಪಗಳು ಇರುವುದಿಲ್ಲ. ಇದರಿಂದ ಅನೈತಿಕ ಚಟುವಟಿಕೆಗಳು ಹೆಚ್ಚಾಗಿದ್ದು, ಅನಾಹುತ ಸಂಭವಿಸಬಹುದಾಗಿರುತ್ತದೆ ಎಂದು ಶ್ರೀ. ರಮೇಶ್‌ಬಾಬು ರವರು ಸಭೆಯಲ್ಲಿ ದೂರಿದರು - ಸಂಬಂಧಿಸಿದಂತೆ ಅಧ್ಯಕ್ಷರು ಮಾತನಾಡಿ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ಸಂಬಂಧಪಟ್ಟ ಇಲಾಖಾವಾರು ಸಮನ್ವಯ ಸಾಧಿಸಿಕೊಂಡು ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ - 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ - 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ